# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **211** |
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಎಂ. ನಾಗರಾಜು (ವಿಧಾನಸಭಾ ಕ್ಷೇತ್ರ)** |
| **ಉತ್ತರಿಸುವ ದಿನಾಂಕ** | : | **28.01.2026** |
| **ಉತ್ತರಿಸುವ ಸಚಿವರು** | : | **ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು** |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr>
<td>ಅ)</td>
<td>ರಾಜ್ಯದಲ್ಲಿ ಕಾಲು ಮತ್ತು ಬಾಯಿ ರೋಗ (FMD) ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳು ಮತ್ತು ಗಡ್ಡೆ ಚರ್ಮರೋಗ (LSD) ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳು ಯಾವುವು;</td>
<td>ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮ (NADCP) ಅಡಿಯಲ್ಲಿ, ರಾಜ್ಯದಲ್ಲಿನ ಎಲ್ಲಾ ಅರ್ಹ ಜಾನುವಾರುಗಳಿಗೆ ಪ್ರತಿ ಆರು ತಿಂಗಳಿಗೆ ಒಮ್ಮೆ ಕಾಲು-ಬಾಯಿ ರೋಗದ (FMD) ವಿರುದ್ಧ ಸಾಮೂಹಿಕ ಲಸಿಕೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮದ ಅನುಷ್ಠಾನದಿಂದ ಇಲ್ಲಿಯವರೆಗೆ ರಾಜ್ಯವು ಯಶಸ್ವಿಯಾಗಿ ಎಂಟು ಸುತ್ತುಗಳ ಕಾಲು-ಬಾಯಿ ರೋಗ ಲಸಿಕಾ ಕಾರ್ಯಕ್ರಮವನ್ನು ಪೂರ್ಣಗೊಳಿಸಿದೆ. ಈ ನಿಯಮಿತ ಸಾಮೂಹಿಕ ಲಸಿಕಾ ಕಾರ್ಯಕ್ರಮವು ಜಾನುವಾರುಗಳಲ್ಲಿ ಗುಂಪು ರೋಗನಿರೋಧಕ ಶಕ್ತಿಯನ್ನು ವೃದ್ಧಿಸುವ ಮೂಲಕ ಜಾನುವಾರು ಆರೋಗ್ಯ ಮತ್ತು ಉತ್ಪಾದಕತೆಯನ್ನು ಹೆಚ್ಚಿಸುತ್ತದೆ.<br><br>ಕಾಲು ಬಾಯಿ ರೋಗ ಲಸಿಕೆ ಹಾಕಿರುವ ವಿವರಗಳು ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ಸುತ್ತು</th><th>ಕಾಲು ಬಾಯಿ ರೋಗ ಲಸಿಕೆ ಹಾಕಿದ ಜಾನುವಾರುಗಳ ಸಂಖ್ಯೆ (ಲಕ್ಷಗಳಲ್ಲಿ)</th></tr>
<tr><td>2020-21</td><td>1st Round</td><td>96.28</td></tr>
<tr><td>2021-22</td><td>2nd Round</td><td>99.45</td></tr>
<tr><td>2022-23</td><td>3rd Round</td><td>100.7</td></tr>
<tr><td>2023-24</td><td>4th Round</td><td>100.8</td></tr>
<tr><td>2024-25</td><td>5th Round</td><td>99.04</td></tr>
<tr><td>2024-25</td><td>6th Round</td><td>97.99</td></tr>
<tr><td>2025-26</td><td>7th Round</td><td>91.91</td></tr>
<tr><td>2025-26</td><td>8th Round</td><td>90.8</td></tr>
</table>
ಚರ್ಮಗಂಟು ರೋಗದ ವಿರುದ್ಧ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ, ವರ್ಷದಲ್ಲಿ ಒಂದು ಬಾರಿ ಎಲ್ಲಾ ಅರ್ಹ ಜಾನುವಾರುಗಳಿಗೆ ಲಸಿಕೆ ಹಾಕುವ ಮೂಲಕ ರೋಗವನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.</td>
</tr>
</table>

<table>
<tr><td></td><td></td><td>2022-23ನೇ ಸಾಲಿನಿಂದ 2025-26ನೇ ಸಾಲಿನ ಡಿಸೆಂಬರ್ ಮಾಹೆಯವರೆಗೆ ಚರ್ಮಗಂಟು ರೋಗದ ನಿಯಂತ್ರಣಕ್ಕಾಗಿ ಹಾಕಲಾಗಿರುವ ಲಸಿಕೆಯ ವಿವರ ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ಚರ್ಮಗಂಟು ರೋಗದ ವಿರುದ್ಧ ಲಸಿಕೆ ಹಾಕಿದ ಜಾನುವಾರುಗಳ ಸಂಖ್ಯೆ (ಲಕ್ಷಗಳಲ್ಲಿ)</th></tr>
<tr><td>2022-23</td><td>101.12</td></tr>
<tr><td>2023-24</td><td>80.29</td></tr>
<tr><td>2024-25</td><td>104.27</td></tr>
<tr><td>2025-26</td><td>81.66</td></tr>
</table>
</td></tr>
<tr><td>ಆ)</td><td>ದೂರದ ಮತ್ತು ಹಿಂದುಳಿದ ಪ್ರದೇಶಗಳನ್ನು ತಲುಪುವಲ್ಲಿ ಸಂಚಾರಿ ಪಶು ವೈದ್ಯಕೀಯ ಚಿಕಿತ್ಸಾಲಯಗಳು (1962 ಟೋಲ್ ಫ್ರೀ ಸಂಖ್ಯೆಯಲ್ಲಿ ಕಾರ್ಯನಿರ್ವಹಿಸುತ್ತಿರುವ "ಪಶು ಸಂಜೀವಿನಿ" ಯೋಜನೆ) ಎಷ್ಟು ಪರಿಣಾಮಕಾರಿಯಾಗಿದೆ;</td><td>ರಾಜ್ಯದಲ್ಲಿ ಜಾನುವಾರುಗಳ ತುರ್ತು ಚಿಕಿತ್ಸೆಗಾಗಿ ಒಟ್ಟು 275 ಸಂಚಾರಿ ಪಶುಚಿಕಿತ್ಸಾ ಘಟಕ ವಾಹನಗಳನ್ನು (ವೆಟರಿನರಿ ಆಂಬ್ಯುಲೆನ್ಸ್) ದೂರದ ಮತ್ತು ಹಿಂದುಳಿದ ಪ್ರದೇಶಗಳನ್ನೊಳಗೊಂಡಂತೆ ರಾಜ್ಯದ ಎಲ್ಲಾ 240 ತಾಲ್ಲೂಕುಗಳಲ್ಲಿ ಕಾರ್ಯಾಚರಣೆಗೊಳಿಸಲಾಗುತ್ತಿದೆ. 1962 ಸಹಾಯವಾಣಿ ಸಂಖ್ಯೆಗೆ ಜಾನುವಾರುಗಳಿಗೆ ತುರ್ತು ಚಿಕಿತ್ಸೆ ಕೋರಿ ರೈತರಿಂದ ಬಂದ ಕರೆಗಳಿಗೆ ಸ್ಪಂದಿಸಿ, ಅಗತ್ಯ ತುರ್ತು ಚಿಕಿತ್ಸೆ ಒದಗಿಸಲಾಗುತ್ತಿದೆ. 2023-24ನೇ ಸಾಲಿನಿಂದ ಡಿಸೆಂಬರ್-2025 ರವರೆಗೆ ಒಟ್ಟು 8.17 ಲಕ್ಷ ಜಾನುವಾರುಗಳಿಗೆ ರೈತರ ಮನೆ ಬಾಗಿಲಿಗೆ ತೆರಳಿ ಚಿಕಿತ್ಸೆ ನೀಡಲಾಗಿದೆ.</td></tr>
<tr><td>ಇ)</td><td>ಪ್ರಾಣಿ ರೋಗಗಳನ್ನು ಸಕಾಲಿಕವಾಗಿ ಗುರುತಿಸುವುದು ಮತ್ತು ತಡೆಗಟ್ಟುವುದನ್ನು ಖಚಿತಪಡಿಸಿಕೊಳ್ಳಲು ತಾಲ್ಲೂಕು ಮಟ್ಟದಲ್ಲಿ ರೋಗನಿರ್ಣಯ ಪ್ರಯೋಗಾಲಯ ಸೌಲಭ್ಯಗಳನ್ನು ಬಲಪಡಿಸಲು ಇಲಾಖೆ ಯಾವ ಕ್ರಮಗಳನ್ನು ಕೈಗೊಂಡಿದೆ;</td><td>ಕೇಂದ್ರ ಪುರಸ್ಕೃತ ಆಸ್ಕಾಡ್ ಯೋಜನೆಯಡಿ ರಾಜ್ಯದ 140 ತಾಲ್ಲೂಕುಗಳಲ್ಲಿ ರೋಗ ನಿರ್ಣಯ ಪ್ರಯೋಗಾಲಯಗಳನ್ನು ಸ್ಥಾಪಿಸಲು ಕ್ರಮವಹಿಸಲಾಗಿದೆ. ಮುಂದುವರೆದು, ಜಿಲ್ಲಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯಕೀಯ ಪಾಲಿಕ್ಲಿನಿಕ್ ಗಳಲ್ಲಿ ಪ್ರಯೋಗಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಪಶುವೈದ್ಯಕೀಯ ಪರೀಕ್ಷಕರುಗಳಿಗೆ ಪ್ರಯೋಗಾಲಯದ ಕಾರ್ಯನಿರ್ವಹಣೆ ಕುರಿತು ತರಬೇತಿ ನೀಡಲಾಗಿರುತ್ತದೆ.</td></tr>
<tr><td>ಈ)</td><td>ಪ್ರಾಣಿಗಳ ಉತ್ತಮ ಆರೋಗ್ಯಕ್ಕಾಗಿ ಇಲಾಖೆ ವತಿಯಿಂದ ಜಾನುವಾರುಗಳಿಗೆ ನಿಯಮಿತವಾಗಿ ಜಂತುಹುಳು ನಿವಾರಣ ಕಾರ್ಯಕ್ರಮಗಳು ಮತ್ತು ಇತರೆ ನಿಯಂತ್ರಣ ಕ್ರಮಗಳನ್ನು ನಡೆಸಲಾಗುತ್ತಿದೆಯೇ ಮಾಹಿತಿ ನೀಡುವುದು?</td><td>ಪ್ರಾಣಿಗಳ ಉತ್ತಮ ಆರೋಗ್ಯ ಮತ್ತು ಲಸಿಕಾ ಕಾರ್ಯಕ್ರಮಗಳ ಫಲಿತಾಂಶಕ್ಕಾಗಿ ಕೇಂದ್ರ ಪುರಸ್ಕೃತ ಆಸ್ಕಾಡ್ ಯೋಜನೆಯಡಿ ಕೇಂದ್ರದ ಅನುದಾನದ ಪಾಲು ಶೇ.60% ಹಾಗೂ ರಾಜ್ಯದ ಅನುದಾನದ ಪಾಲು ಶೇ.40% ರ ಅನುಪಾತದಲ್ಲಿ 2024-25ನೇ ಹಾಗೂ 2025-26ನೇ ಸಾಲಿನಲ್ಲಿ ಲಭ್ಯವಿರುವ ಅನುದಾನದಲ್ಲಿ ಜಂತುನಾಶಕ ಔಷಧಿ ನೀಡಿ, ಅಗತ್ಯವಿರುವ ಲಸಿಕೆಗಳನ್ನು ಉಚಿತವಾಗಿ ಕಾಲಕಾಲಕ್ಕೆ ನೀಡಲಾಗುತ್ತಿದೆ.</td></tr>
</table>

**ಪಸಂಮೀ 10 ಸಲೆವಿ 2026**

**(ಕೆ. ವೆಂಕಟೇಶ್)**
**ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**